# IN THE COURT OF THE ADDL. SENIOR CIVIL JUDGE & JMFC., GUBBI
# **RA – 37/2024**

Witness present and duly sworn on: 11.02.2026.

**Cross examination by AGP for Respondent No.1 to 3:**

ನಾನು 7 ನೇ ತರಗತಿಯವರೆಗೆ ಓದಿದ್ದೇನೆ. ನನಗೆ ಇಂಗ್ಲಿಷ್ ಓದಲು ಮತ್ತು ಬರೆಯಲು ಬರುವುದಿಲ್ಲ. ನನ್ನ ಸಾಕ್ಷಿ ಪ್ರಮಾಣ ಪತ್ರವು ಆಂಗ್ಲ ಭಾಷೆಯಲ್ಲಿ ಇದೆ ಎಂದರೆ ಸರಿ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರಗಳು ಗೊತ್ತಿಲ್ಲ ಎಂದರೆ ಸರಿ. ನಾನು ಶ್ರೀದೇವಿ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದ ಕಾರಣ ಕಾಲ ಮಿತಿಯಲ್ಲಿ ಮೇಲ್ಮನವಿ ಸಲ್ಲಿಸಲು ಆಗಿಲ್ಲ ಎಂದು ಸುಳ್ಳು ಹೇಳಿದ್ದೇನೆಂದರೆ ಸರಿಯಲ್ಲ. OS No.67/2014 ದಾವೆಯು ಗುಬ್ಬಿ ಸಿವಿಲ್ ನ್ಯಾಯಾಲಯದಲ್ಲಿ ದಿನಾಂಕಃ 28.01.2023 ರಂದು ವಜಾ ಆಗಿದೆ ಎಂದರೆ ಸರಿ. ವಜಾ ಆಗಿರುವ ವಿಚಾರವನ್ನು ವಕೀಲರು ನನಗೆ ತಿಳಿಸಿದರು ಎಂದರೆ ಸರಿಯಲ್ಲ. ವಕೀಲರು ಮಾಹಿತಿ ನೀಡಿದ್ದರು ಸಹ ನಾನು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ. ದಿನಾಂಕಃ 02.08.2023 ರಂದು ನಕಲು ಪ್ರತಿ ಪಡೆಯಲು ಅರ್ಜಿ ಸಲ್ಲಿಸಿದ್ದು ಆಸ್ಪತ್ರೆಯಲ್ಲಿ ಇದ್ದ ಕಾರಣ ವಕೀಲರನ್ನು ಭೇಟಿಯಾಗಲಿಲ್ಲ ಎಂದು ಸುಳ್ಳು ಹೇಳಿದ್ದೇನೆಂದರೆ ಸರಿಯಲ್ಲ. ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವ ಬಗ್ಗೆ ನ್ಯಾಯಾಲಯದಲ್ಲಿ ದಾಖಲೆಯನ್ನು ಹಾಜರುಪಡಿಸಿದ್ದೇನೆ. ದಿನಾಂಕಃ 22.11.2023 ರಂದು ಶ್ರೀದೇವಿ ಆಸ್ಪತ್ರೆಯಲ್ಲಿ ಒಳರೋಗಿ ಭರ್ತಿಯಾಗಿದ್ದೇನು ಎಂದರೆ ಸರಿ. ದಿನಾಂಕಃ 11.12.2023 ರಂದು ಸದರಿ ಆಸ್ಪತ್ರೆಯಿಂದ ಬಿಡುಗಡೆ ಆಗಿದ್ದೇನೆಂದರೆ ಸರಿ. ಆದರೂ ಸಹ ಒಂದು ವರ್ಷ ವಿಳಂಬವಾಗಿ ಮೇಲ್ಮನವಿ ಸಲ್ಲಿಸಿದ್ದೇನೆಂದರೆ ಪ್ರತಿ ಎರಡು ದಿನಕ್ಕೊಮ್ಮೆ ನಾನು ಆಸ್ಪತ್ರೆಗೆ ಹೋಗಿ ಬ್ಯಾಂಡೇಜ್ ಮಾಡಿಸಬೇಕಿತ್ತು. ಮೇಲ್ಮನವಿಯನ್ನು ದಿನಾಂಕಃ 19.11.2024 ರಂದು ಸಲ್ಲಿಸಿದ್ದೇನೆಂದರೆ ಸರಿ. 1 ನೇ ಮೇಲ್ಮನವಿದಾರರು ನನ್ನ ಹೆಂಡತಿ. ಅವರು ಆರೋಗ್ಯವಾಗಿ ಇದ್ದರು ಎಂದರೆ ಸರಿ. ಅವರು ಕಾಲಮಿತಿಯಲ್ಲಿ ಮೇಲ್ಮನವಿ ಸಲ್ಲಿಸಲು ಅವಕಾಶ ಇದ್ದರು ಸಹ ದುರುದ್ದೇಶದಿಂದ ಸರ್ಕಾರಿ ಜಮೀನನ್ನು ಕಬಳಿಸಲು

ವಿಳಂಬವಾಗಿ ಮೇಲ್ಮನವಿ ಸಲ್ಲಿಸಿದ್ದೇವೆಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷಿ ಪ್ರಮಾಣ ಪತ್ರ ಸಲ್ಲಿಸಿದ್ದೇನೆಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**Re-examination-Nil.**

(Typed to my dictation in open court)

R.O.I & A.C.

Addl. Senior Civil Judge and
JMFC., Gubbi